# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | : | 36(101) |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 19/12/2022 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರೊ: ವೈದ್ಯನಾಥನ್ ವರದಿಯನ್ನು ಸರ್ಕಾರವು ಒಪ್ಪಿದ ನಂತರ ದೈಹಿಕ ಶಿಕ್ಷಣ ಶಿಕ್ಷಕರ ಬಡ್ತಿ, ನೇಮಕಾತಿ ಹುದ್ದೆ ಸೃಜಿಸುವ ಸಂಬಂಧ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲು ಸರ್ಕಾರ ತೀರ್ಮಾನಿಸಿದೆಯೇ; (ಪೂರ್ಣ ವಿವರಗಳೊಡನೆ ಮಾಹಿತಿ ನೀಡುವುದು) | ಹೌದು.<br><br>ಸರ್ಕಾರದ ಆದೇಶ ಸಂಖ್ಯೆ:ಇಡಿ 290 ಎಸ್‌ಎಲ್‌ಬಿ 2006, ದಿ:06/08/2007ರಲ್ಲಿ ಪ್ರೊ:ವೈದ್ಯನಾಥನ್ ವರದಿಗೆ ಅನುಮೋದನೆ ನೀಡಿದ್ದು, ಸದರಿ ವರದಿಯಲ್ಲಿನ 14 ಅಂಶಗಳ ಪೈಕಿ 13 ಅಂಶಗಳನ್ನು ಜಾರಿಗೊಳಿಸಲಾಗಿದ್ದು, ಉಳಿದ 14ನೇ ಅಂಶವಾದ ದೈಹಿಕ ಶಿಕ್ಷಣ ಶಿಕ್ಷಕರುಗಳ ಪದನಾಮವನ್ನು "ಸಹ ಶಿಕ್ಷಕರು" (ದೈಹಿಕ ಶಿಕ್ಷಣ) ಎಂದು ಪರಿಗಣಿಸಲು ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಣೆ ಮಾಡುವ ಬಗ್ಗೆ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರು ದಿನಾಂಕ:30/05/2018ರಂದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.<br><br>ಸದರಿ ಪ್ರಸ್ತಾವನೆಯ ಕುರಿತು ನಿಯಮಾನುಸಾರ ಪರಿಶೀಲಿಸಲಾಗಿದ್ದು, ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿನ ಕೆಲವು ಹುದ್ದೆಗಳ ನೇಮಕಾತಿ ವಿಧಾನ ಮತ್ತು ಹುದ್ದೆಗೆ ನಿಗಧಿಪಡಿಸಿರುವ ವಿದ್ಯಾರ್ಹತೆಯಲ್ಲಿ ಸ್ಪಷ್ಟತೆ ಹಾಗೂ ನಿಖರತೆ ಇಲ್ಲದೇ ಇರುವುದರಿಂದ ಈ ಹಿಂದೆ ಆಯುಕ್ತರು ಸಲ್ಲಿಸಿದ ಪ್ರಸ್ತಾವನೆಯನ್ನು ಸಮಗ್ರವಾಗಿ ಮರು ಪರಿಷ್ಕರಿಸಿ ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಆಯುಕ್ತರಿಗೆ ತಿಳಿಸಿದ್ದು, ಅದರಂತೆ ದಿನಾಂಕ:18/04/2022ರಂದು 31 ವೃಂದಗಳಿಗೆ ಸಂಬಂಧಿಸಿದಂತೆ ನಂತರ ದಿನಾಂಕ: 05/09/2022ರಂದು ಸಮಗ್ರವಾಗಿ ಒಟ್ಟು 73 ವೃಂದಗಳಿಗೆ ಸಂಬಂಧಿಸಿದ ಪರಿಷ್ಕೃತ ಪ್ರಸ್ತಾವನೆಯನ್ನು ದಿನಾಂಕ:05/09/2022ರಂದು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.<br><br>ಈ ಕುರಿತಂತೆ ಸರ್ಕಾರದ ಆದೇಶ ಸಂಖ್ಯೆ:ಡಿಪಿಎಆರ್ 97 ಎಸ್‌ಆರ್‌ಡಿ 2004 ದಿನಾಂಕ:08/10/2004, ಸಿಆಸುಇ 82 ಸೇನಿಡಿ 2006 ದಿನಾಂಕ:13/07/2007 ಮತ್ತು ಸುತ್ತೋಲೆ ಸಂಖ್ಯೆ :ಸಿಆಸುಇ 124 ಸೇನಿಡಿ 2012 ದಿನಾಂಕ :10/08/2012ರನ್ವಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸುವ ಕುರಿತು ಕ್ರಮವಹಿಸಬೇಕಾಗಿದ್ದು, ಅದರಂತೆ ಸಮಗ್ರ ತಿದ್ದುಪಡಿ ಪ್ರಸ್ತಾವನೆ ಕುರಿತು ಆರ್ಥಿಕ ಇಲಾಖೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಹಾಗೂ ಸಂಸದೀಯ ವ್ಯವಹಾರಗಳ ಮತ್ತು ಶಾಸನ ರಚನಾ ಇಲಾಖೆಗಳ ಸಹಮತಿ ಕೋರಲಾಗಿರುತ್ತದೆ. ಈ ಬಗ್ಗೆ ಆರ್ಥಿಕ ಇಲಾಖೆ ಮತ್ತು ಸಂಸದೀಯ ವ್ಯವಹಾರಗಳ ಮತ್ತು ಶಾಸನ |
| ಆ) | ಈ ಸಂಬಂಧ ಇದುವರೆವಿಗೂ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಪೂರ್ಣ ವಿವರಗಳೊಡನೆ ಮಾಹಿತಿ ನೀಡುವುದು) | |

| | | | |
|---|---|---|---|
| | | | ರಚನಾ ಇಲಾಖೆಗಳಿಂದ ಅಭಿಪ್ರಾಯ ನೀಡುತ್ತಾ, ಕೆಲವು ಮಾಹಿತಿ ಮತ್ತು ಸ್ಪಷ್ಟೀಕರಣವನ್ನು ಕೋರಲಾಗಿರುತ್ತದೆ. ಈ ಬಗ್ಗೆ ಆಯುಕ್ತರಿಗೆ ದಿನಾಂಕ : 09/12/2022ರಂದು ಪತ್ರ ಬರೆದು ಮಾಹಿತಿ ಮತ್ತು ಸ್ಪಷ್ಟೀಕರಣವನ್ನು ನೀಡುವಂತೆ ಕೋರಲಾಗಿರುತ್ತದೆ. ಆಯುಕ್ತರಿಂದ ಮಾಹಿತಿ ಸ್ವೀಕೃತವಾದ ನಂತರ ನಿಯಮಾನುಸಾರ ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು. |
| (ಇ) | ಸರ್ಕಾರಿ ಹಾಗೂ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಣ ಶಿಕ್ಷಕರ ಸಂಖ್ಯೆ ಎಷ್ಟು; ಯಾವ ಕಾಲಮಿತಿಯಲ್ಲಿ ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು; | (ಅ) | ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಒಟ್ಟು 2120 ದೈಹಿಕ ಶಿಕ್ಷಣ ಶಿಕ್ಷಕರು ಗ್ರೇಡ್ –2 ಹುದ್ದೆಗಳು ಖಾಲಿ ಇದ್ದು, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸುತ್ತಿದ್ದು, ಕಡತವು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.<br><br>ರಾಜ್ಯದ ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಒಟ್ಟು ದೈಹಿಕ ಶಿಕ್ಷಕರ ಹುದ್ದೆಗಳು 221. ರಾಜ್ಯದ ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ:280 ಇದ್ದಲ್ಲಿ, ಅಂತಹ ಶಾಲೆಗಳಿಗೆ ದೈಹಿಕ ಶಿಕ್ಷಣ ಶಿಕ್ಷಕರನ್ನು ನೇಮಿಸಲು ಅವಕಾಶವಿರುತ್ತದೆ.<br><br>ಆದರೆ, ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ 267 ಪಿಎಂಸಿ 2007, ದಿ:12/10/2007ರಲ್ಲಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಹೆಚ್ಚುವರಿ ಶಿಕ್ಷಕರು ಇರುವುದರಿಂದ ಅವುಗಳಲ್ಲಿ ಅನುದಾನಿತ ಹುದ್ದೆಗಳು ಖಾಲಿಯಾದಲ್ಲಿ ಅಥವಾ ಒಂದು ಖಾಸಗಿ ಪ್ರಾಥಮಿಕ ಶಾಲೆಯನ್ನು ಸಹಾಯಾನುದಾನಕ್ಕೆ ಒಳಪಡಿಸಿದ ಪ್ರಥಮ ಸಂದರ್ಭದಲ್ಲಿ ಕೆಲವು ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳನ್ನು ಸಹಾಯಾನುದಾನಕ್ಕೆ ಒಳಪಡಿಸದೇ ಉಳಿದಿದ್ದಲ್ಲಿ, ಅಂತಹ ಖಾಲಿ ಹುದ್ದೆಗಳನ್ನು ಹೆಚ್ಚುವರಿ ಶಿಕ್ಷಕರುಗಳಿಂದ ತುಂಬಿಕೊಳ್ಳಬೇಕಾಗಿದೆ ಹೊರತು ನೇರ ನೇಮಕಾತಿ ಮಾಡಿಕೊಳ್ಳತಕ್ಕದ್ದಲ್ಲ ಎಂದು ಆದೇಶಿಸಲಾಗಿದೆ. |
| | | (ಆ) | ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಪ್ರಸ್ತುತ 1424 ದೈಹಿಕ ಶಿಕ್ಷಕರ ಹುದ್ದೆಗಳು ಖಾಲಿ ಇರುತ್ತವೆ.<br><br>ಪ್ರಸ್ತುತ ಆರ್ಥಿಕ ಇಲಾಖೆಯ ಸಹಮತಿ ಮೇರೆಗೆ ಸರ್ಕಾರದ ಪತ್ರ ಸಂಖ್ಯೆ :ಇಪಿ 14 ಎಲ್‌ಬಿಪಿ 2022, ದಿನಾಂಕ:13/09/2022ರಲ್ಲಿ ಸದರಿ ಖಾಲಿ ಹುದ್ದೆಗಳ ಪೈಕಿ 200 ದೈಹಿಕ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಕೇಂದ್ರೀಕೃತ ದಾಖಲಾತಿ ಘಟಕ, ಬೆಂಗಳೂರು ಇವರ ಮೂಲಕ ಕ್ರಮವಹಿಸುವಂತೆ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ತಿಳಿಸಲಾಗಿದೆ. |

| | | | |
|---|---|---|---|
| | | | ರಾಜ್ಯದ ಖಾಸಗಿ ಅನುದಾನಿತ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಣ ಶಿಕ್ಷಕರ ಸಂಖ್ಯೆ :600<br><br>ಸರ್ಕಾರದ ಆದೇಶ ಸಂಖ್ಯೆ :ಇಡಿ 14 ಎಸ್ ಎಸ್ ಇ 2017, ದಿನಾಂಕ:25/09/2018ರಲ್ಲಿ, ದಿ :31/12/2015ರ ಪೂರ್ವದಲ್ಲಿ ಖಾಲಿಯಾದ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ.<br><br>ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 240 ಸೇನಿನಿ 2022, ದಿನಾಂಕ :18/11/2022ರಲ್ಲಿ ಸರ್ಕಾರದ ಅಧಿಸೂಚನೆ ಸಂಖ್ಯೆ:ಸಕಿ 84 ಎಸ್‌ಟಿ ಪಿ 2021 ರನ್ವಯ ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು / ಪಂಗಡಗಳ (ಶೈಕ್ಷಣಿಕ ಸಂಸ್ಥೆಗಳಲ್ಲಿನ ಹಾಗೂ ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಮೀಸಲಾತಿ ಹೆಚ್ಚಳ ಮಾಡಿದ್ದು, ಮೀಸಲಾತಿ ಬಿಂದುಗಳ ನಿಗದಿ ಬಗ್ಗೆ ಪರಿಷ್ಕೃತ ಆದೇಶ ಬರುವವರೆಗೆ ಎಲ್ಲಾ ನೇಮಕಾತಿ ಪ್ರಕ್ರಿಯೆಗಳನ್ನು ದಿನಾಂಕ:01/11/2022ರಿಂದ ಜಾರಿಗೆ ಬರುವಂತೆ ತಡೆಹಿಡಿಯಲಾಗಿರುತ್ತದೆ. ಈ ಬಗ್ಗೆ ಆದೇಶ ಬಂದ ನಂತರ ಶೀಘ್ರದಲ್ಲಿಯೇ ನೇಮಕಾತಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುವುದು. |
| | | (ಇ) | ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಒಟ್ಟು 20 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳು ಖಾಲಿ ಇದ್ದು, ಇದರಲ್ಲಿ 10 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕೋರಿ ಪ್ರಸ್ತಾವನೆಯನ್ನು ದಿನಾಂಕ :18/11/2021, ದಿನಾಂಕ:30/04/2022 ಮತ್ತು 22/11/2022ರ ಪತ್ರಗಳಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಕಳುಹಿಸಲಾಗಿರುತ್ತದೆ. ಸದರಿ ಪ್ರಾಧಿಕಾರವು ಅಭ್ಯರ್ಥಿಗಳನ್ನು ಆಯ್ಕೆ ಮಾಡಿ, ಪಟ್ಟಿ ನೀಡಿದ ಕೂಡಲೇ ಭರ್ತಿ ಮಾಡಲಾಗುವುದು.<br><br>ಉಳಿದ 10 ಹುದ್ದೆಗಳನ್ನು ಬಡ್ತಿ ಮೂಲಕ ಭರ್ತಿಗಾಗಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅರ್ಹ ಗ್ರೇಡ್-1 ದೈಹಿಕ ಶಿಕ್ಷಣ ಶಿಕ್ಷಕರ ಪೈಕಿ 24 ಅರ್ಹ ಗ್ರೇಡ್-1 ದೈಹಿಕ ಶಿಕ್ಷಣ ಶಿಕ್ಷಕರಿಂದ ವ್ಯಕ್ತಿ ಪೂರ್ವೋತ್ತರ ದಸ್ತಾವೇಜುಗಳನ್ನು ಸಲ್ಲಿಸುವಂತೆ ಕೋರಲಾಗಿದ್ದು, ಈ ಬಗ್ಗೆ ದಾಖಲೆಗಳು ಸ್ವೀಕೃತಿಯಾದ ಕೂಡಲೇ ನಿಯಮಾನುಸಾರ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು. |

| | | |
|---|---|---|
| | | ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದಿ:31/12/2015ರ ಅಂತ್ಯಕ್ಕೆ ಒಟ್ಟು 62 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳು ಖಾಲಿ ಇರುತ್ತವೆ. ಈ 62 ಹುದ್ದೆಗಳ ಪೈಕಿ 15 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. ಉಳಿದ 47 ಹುದ್ದೆಗಳಿಗೆ ಆಡಳಿತ ಮಂಡಳಿಯವರು ಹುದ್ದೆಗಳ ಭರ್ತಿಗಾಗಿ ಪ್ರಸ್ತಾವನೆಯನ್ನು ಸಲ್ಲಿಸಿದಲ್ಲಿ, ಈ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುವುದು. |
| (ಈ) | ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ನಿರ್ದೇಶಕರ ಹುದ್ದೆಯನ್ನು ಸೃಜಿಸಲಾಗಿದೆಯೇ; | ಸೃಜಿಸಲಾಗಿರುವುದಿಲ್ಲ. |
| (ಉ) | ಸದರಿ ಶಿಕ್ಷಕರಿಗೆ ಪ್ರತಿ ವರ್ಷ ಉನ್ನತ ವಿದ್ಯಾಭ್ಯಾಸಕ್ಕೆ ವೇತನ ಸಹಿತ ಅನುಮತಿಯನ್ನು ನೀಡದಿರಲು ಸರ್ಕಾರಕ್ಕಿರುವ ತೊಂದರೆಗಳೇನು; (ವಿವರಗಳೊಡನೆ ಮಾಹಿತಿ ಒದಗಿಸುವುದು) | ಹುದ್ದೆಗಳನ್ನು ಭರ್ತಿ ಮಾಡಿದ ನಂತರ ಸದರಿ ಶಿಕ್ಷಕರಿಗೆ ಉನ್ನತ ವಿದ್ಯಾಭ್ಯಾಸಕ್ಕೆ ವೇತನ ಸಹಿತ ಅನುಮತಿಯನ್ನು ನೀಡುವ ಕುರಿತು ನಿಯಮಾನುಸಾರ ಪರಿಶೀಲಿಸಿ ಅಗತ್ಯ ಕ್ರಮವಹಿಸಲಾಗುವುದು. |
| (ಊ) | ಯಾವ ಕಾಲಮಿತಿಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಪೂರ್ಣ ಪ್ರಮಾಣದಲ್ಲಿ ತಿದ್ದುಪಡಿ ತರಲಾಗುವುದು? | ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 35 ಡಿಜಿಒ 2009 ದಿನಾಂಕ:15-05-2014ರ ಸಮಗ್ರ ಪುನರಾವಲೋಕನ ವೃಂದ ಮತ್ತು ನೇಮಕಾತಿ ನಿಯಮಗಳು ರಚನೆಯಾಗಿರುತ್ತದೆ. ಅದರನ್ವಯ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳ ವೃಂದಬಲ, ನೇಮಕಾತಿ ವಿಧಾನ ಮತ್ತು ವಿದ್ಯಾರ್ಹತೆ ಮಾನದಂಡವನ್ನು ಅಳವಡಿಸಲಾಗಿರುತ್ತದೆ. ಈ ನಿಯಮಗಳಿಗೆ ತಿದ್ದುಪಡಿ ತರುವ ಯಾವುದೇ ಪ್ರಸ್ತಾವನೆ ಇರುವುದಿಲ್ಲ.<br><br>ಸಾರ್ವಜನಿಕ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಪ್ರಶ್ನೆ "ಅ" ಮತ್ತು "ಆ" ಗೆ ನೀಡಿರುವ ಉತ್ತರವನ್ನು ಈ ಪ್ರಶ್ನೆಗೆ ಅನ್ವಯಿಸಿಕೊಳ್ಳಲು ಕೋರುತ್ತಾ, ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿ ಕುರಿತು ನಿಯಮಿಸಲಾಗಿರುವ ಕಾರ್ಯವಿಧಾನಗಳನ್ನು ಅನುಸರಿಸಿ ಆದಷ್ಟು ಶೀಘ್ರವಾಗಿ ಸಮಗ್ರ ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿಗೆ ಕ್ರಮವಹಿಸಲಾಗುವುದು. |

ಸಂಖ್ಯೆ:ಇಪಿ 131 ಡಿಎಆರ್ 2022

(ಬಿ.ಸಿ. ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ
ಹಾಗೂ ಸಕಾಲ ಸಚಿವರು